ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 15–09–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ವಿಶ್ವ ಚಾಲಕರ ದಿನಾಚರಣೆ – 2015:<br><br>ಉದ್ಘಾಟನೆ:<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ<br><br>ಅಧ್ಯಕ್ಷತೆ:<br><br>ಮುನಿರತ್ನ,<br>ಶಾಸಕರು,<br>ರಾಜಾರಾಜೇಶ್ವರಿನಗರ | 16–09–2015<br>ಬುಧವಾರ<br>ಬೆಳಿಗ್ಗೆ<br>11–00 ಗಂಟೆಗೆ | ಯಶವಂತಪುರ ಟ್ರಕ್ ಟರ್ಮಿನಲ್ಸ್‌ನ ಸ್ಥಿರ ನಿಲುಗಡೆ ಆವರಣ, ಕೈಗಾರಿಕೆ ಉಪನಗರ, 2ನೇ ಹಂತ, ಕಂಠೀರವ ಸ್ಟುಡಿಯೋ ಎದುರು, ಯಶವಂತಪುರ, ಬೆಂಗಳೂರು – 560 022 |
| 2. | State Level Bankers Committee Meeting.<br><br>Preside by:<br><br>Siddaramaiah,<br>Chief Minister, GOK<br><br>ವಿ.ಸೂ: ಕಾರ್ಯಕ್ರಮದ ಉದ್ಘಾಟನಾ ಅಧಿವೇಶನಕ್ಕೆ ಮಾತ್ರ ಮಾಧ್ಯಮದವರಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ. | 18–09–2015<br>Friday<br>at<br>11-00 AM | Conference Hall, Room No. 334, 3rd Floor, Vidhana Soudha, Bengaluru. |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು:
## "ತಲ್ಲಣ" ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು, ಸೆಪ್ಟೆಂಬರ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಸೆಪ್ಟೆಂಬರ್ 19 ರ ಶನಿವಾರದಂದು ಬೆಳ್ಳಿ ಸಿನಿಮಾ "ತಲ್ಲಣ" ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಈ ಚಿತ್ರದ ಕಾರ್ಯಕಾರಿ ನಿರ್ಮಾಪಕರಾದ ಶ್ರೀಮತಿ ವಸುಂಧರಾ ಕುಲಕರ್ಣಿ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಸೆಪ್ಟೆಂಬರ್ 19 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಚಲನಚಿತ್ರ ನಟರಾದ ಕೆ. ಎಸ್. ಶ್ರೀಧರ್, ಸಂಕಲನಕಾರರಾದ ಎಂ. ಎನ್. ಸ್ವಾಮಿ ಹಾಗೂ ಛಾಯಾಗ್ರಾಹಕರಾದ ಸೂರ್ಯಕಾಂತ್ ಹೊನ್ನಾಳಿ ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್.

## ವಾರ್ತಾಧಿಕಾರಿಗಳ ರಾಜ್ಯ ಮಟ್ಟದ ಸಭೆ

ಬೆಂಗಳೂರು, ಸೆಪ್ಟೆಂಬರ್ 15 (ಕರ್ನಾಟಕ ವಾರ್ತೆ)

ರಾಜ್ಯ ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆಯ ರಾಜ್ಯದ ಎಲ್ಲಾ ವಾರ್ತಾಧಿಕಾರಿಗಳ ಸಭೆಯು ಇಂದು ಬೆಂಗಳೂರಿನ ವಾರ್ತಾ ಸೌಧದದಲ್ಲಿ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ವಹಿಸಿದ್ದರು.

ಸಭೆಯಲ್ಲಿ ಕನ್ನಡ, ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ ಬಿ. ಜಿ. ನಂದಕುಮಾರ್ ಅವರು ಮಾತನಾಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆದಿರುವ "ಜನ–ಮನ" ಕಾರ್ಯಕ್ರಮದ ಬಗ್ಗೆ ಸಾರ್ವಜನಿಕರಿಂದ ಹಾಗೂ ಆಯಾ ಜಿಲ್ಲಾ ಉಸ್ತುವಾರಿ ಸಚಿವರುಗಳಿಂದ

ಕಾರ್ಯಕ್ರಮ ಆಯೋಜನೆ ಕುರಿತಂತೆ  ಬಂದ ಪ್ರತಿಕ್ರಿಯೆಗಳು ಹಾಗೂ ಕಾರ್ಯಕ್ರಮಗಳ ಯಶಸ್ಸಿ ಬಗ್ಗೆ ವಿವರ ಪಡೆದರು.

ಸಭೆಯಲ್ಲಿ ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಂಟಿ ನಿರ್ದೇಶಕರಾದ ಎಂ. ರವಿಕುಮಾರ್, ಎನ್. ಭೃಂಗೀಶ್, ಪಿ.ಎನ್. ಗುರುಮೂರ್ತಿ, ಇಲಾಖೆಯ ವಿವಿಧ ಶಾಖೆಗಳ ಉಪ ನಿರ್ದೇಶಕರು,  ಸಹಾಯಕ ನಿರ್ದೇಶಕರು, ಜಿಲ್ಲಾ ಮಟ್ಟದ ವಾರ್ತಾಧಿಕಾರಿಗಳು ಹಾಗೂ ಸಿಬ್ಬಂದಿ ಸಭೆಯಲ್ಲಿ ಪಾಲ್ಗೊಂಡಿದ್ದರು.

ಸಭೆಯಲ್ಲಿ ಮುಂಬರುವ ದಿನಗಳಲ್ಲಿ ಇಲಾಖೆಯು ಹಮ್ಮಿಕೊಳ್ಳುತ್ತಿರುವ "ಗಾಂಧಿ ಕನಸು ಕರ್ನಾಟಕದಲ್ಲಿ ನನಸು", "ಗಾನಯಾನ", "ಬರಪರಿಹಾರ ಹಾಗೂ ಜಾಹೀರಾತು ನೀತಿ ಅನುಷ್ಠಾನ", "ಸಾಕ್ಷ್ಯಚಿತ್ರ ನಿರ್ಮಾಣ", "ಪ್ರಕಟಣೆಗಳು ಹಾಗೂ ಹೆದ್ದಾರಿ ಫಲಕಗಳು" ರಾಜ್ಯದ 28 ಜಿಲ್ಲೆಗಳಲ್ಲಿ ಮಾಜಿ ಪ್ರಧಾನಿ ದಿ: ಪಂಡಿತ್ ದಿ: ಜವಹರ್‌ಲಾಲ್ ನೆಹರೂ ಅವರು ಕುರಿತ ಅಪೂರ್ವ  ಛಾಯಾಚಿತ್ರ ಪ್ರದರ್ಶನ ಹಾಗೂ ಇಲಾಖೆಯಲ್ಲಿ ಇ–ಕಚೇರಿ ಅನುಷ್ಠಾನ ಕುರಿತಂತೆ ವಿವರವಾಗಿ ಚರ್ಚೆ ನಡೆಯಿತು.

ರಾಜ್ಯ ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಉಪ ನಿರ್ದೇಶಕ ಹೆಚ್.ಬಿ. ದಿನೇಶ್ ಅವರು ಎಲ್ಲರನ್ನು ಸ್ವಾಗತಿಸಿದರು.

ಪಲ್ಲವಿ/ಬಾಬು/ಕೆಎಂ

## ಗ್ರಾಮೀಣ ಜನರ ಅಭಿವೃದ್ದಿಗಾಗಿ ಗುಣಾತ್ಮಕವಾಗಿ ಕರ್ತವ್ಯ ನಿರ್ವಹಿಸಲು ಸೂಚನೆ

–ಎಚ್.ಕೆ. ಪಾಟೀಲ್

ಬೆಂಗಳೂರು,  ಸೆಪ್ಟೆಂಬರ್ 15 (ಕರ್ನಾಟಕ ವಾರ್ತೆ)

ಸೆಪ್ಟೆಂಬರ್ ೧೫: ಗ್ರಾಮೀಣ ಜನರ ಅಭಿವೃದ್ಧಿಗಾಗಿ ಗುಣಾತ್ಮಕವಾಗಿ ಕರ್ತವ್ಯ ನಿರ್ವಹಿಸುವ ಮೂಲಕ ಸರ್ಕಾರವು ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಕಾಣುತ್ತಿರುವ ಹೊಸ ಕಲ್ಪನೆಯನ್ನು ಸಾಕಾರಗೊಳಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ  ಎಚ್.ಕೆ ಪಾಟೀಲ್ ಇಲಾಖೆಗೆ ನೂತನವಾಗಿ ಆಯ್ಕೆಗೊಂಡಿರುವ ಕಿರಿಯ ಇಂಜಿನಿಯರುಗಳಿಗೆ ಸೂಚಿಸಿದರು.

ಇಂದು ಬೆಳಿಗ್ಗೆ ಗಾಂಧಿ ಭವನದಲ್ಲಿ  ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ನೂತನವಾಗಿ ಆಯ್ಕೆಗೊಂಡಿರುವ ಕಿರಿಯ ಇಂಜಿನಿಯರುಗಳಿಗಾಗಿ ಏರ್ಪಡಿಸಲಾಗಿದ್ದ ಸಂಕಲ್ಪ ದಿನ ದ ಕಾರ್ಯಕ್ರಮದಲ್ಲಿ ಅಧ್ಯಕ್ಷತೆವಹಿಸಿ ಮಾತಾನಾಡಿದ ಸಚಿವರು, ವಿಶ್ವೇಶ್ವರಯ್ಯ ಅವರ ಜನ್ಮದಿನಾಚರಣೆಯ ದಿನದಂದು, ಮಹಾನ್ ವ್ಯಕ್ತಿಗಳಾದ ನಿವೃತ್ತ ನ್ಯಾಯಮೂರ್ತಿ ಎಂ.ಎನ್. ವೆಂಕಟಾಚಲಯ್ಯ ಮತ್ತು ಗಾಂಧಿವಾದಿಗಳಾದ ಹೊ. ಶ್ರೀನಿವಾಸಯ್ಯ ಅಂತಹವರ ಸಮ್ಮುಖದಲ್ಲಿ ಸರ್ಕಾರಿ ಸೇವೆಗೆ ಹೊಸ ಹೆಜ್ಜೆ ಇಡುತ್ತಿರುವುದು  ನಿಮ್ಮಗಳ ಸೌಭಾಗ್ಯವೆಂದರು.

ಇಲಾಖೆಯ ಮೂಲಕ ಇದೇ ಮೊದಲ ಬಾರಿಗೆ ಇಷ್ಟು ಸಂಖ್ಯೆಯಲ್ಲಿ ಮೆರಿಟ್ ಅಧಾರದ ಮೇಲೆ ಇಂಜಿನಿಯರುಗಳನ್ನು ಆಯ್ಕೆ ಮಾಡಲಾಗಿದೆ. ಮೆರಿಟ್ ಮೇಲೆ ಆಯ್ಕೆಯಾಗಿರುವ ತಾವು ಯಾರ ಒತ್ತಡಕ್ಕೂ ಸಿಲುಕದೆ ಧೈರ್ಯವಾಗಿ ಗ್ರಾಮೀಣ ಜನರ ಅಭಿವೃದ್ಧಿಗೆ ಶ್ರಮಿಸಬೇಕೆಂದು ಆದೇಶಿಸಿದರು.

ಸರ್ಕಾರವು ೨೦೧೮ ಅಕ್ಟೋಬರ್ ಮಾಹೆಯೊಳಗೆ ಕರ್ನಾಟಕ ರಾಜ್ಯದ ಗ್ರಾಮೀಣ ಭಾಗವನ್ನು ಬಯಲು ಶೌಚಮುಕ್ತ ಮಾಡುವ ಸಂಕಲ್ಪವನ್ನು ಹೊಂದಿರುವುದರಿಂದ ಸ್ಥಳೀಯವಾಗಿ ಸರ್ಕಾರದ ಯೋಜನೆಗಳನ್ನು ಕಾರ್ಯಗತಗೊಳಿಸುವ ತಾವು ಈ ಯೋಜನೆಗೆ ಹೆಚ್ಚು ಒತ್ತು ನೀಡುವ ಜೊತೆಗೆ ಗ್ರಾಮೀಣ ಪ್ರದೇಶದ ಗುಣಾತ್ಮಕ ಬದಲಾವಣೆಗೆ ಬೇಕಾದ ರಸ್ತೆ, ಆಟದ ಮೈದಾನ, ಸ್ಮಶಾನ ಮುಂತಾದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬೇಕೆಂದು ಸಚಿವರು ತಿಳಿಸಿದರು.

ಇಂದಿನ ಯುವ ಇಂಜಿನಿಯರುಗಳಾದ ತಾವು ಇಂದಿನ ಹೊಸ ತಂತ್ರಜ್ಞಾನದ ಬಳಕೆಯನ್ನು ಇಲಾಖೆಯ ಎಲ್ಲಾ ಯೋಜನೆಗಳಲ್ಲಿ ಅಳವಡಿಸಿಕೊಳ್ಳುವ ಮೂಲಕ ರಾಜ್ಯದ ಏಳಿಗೆಗೆ ಸಹಕರಿಸುವಂತೆ ನೂತನವಾಗಿ ಆಯ್ಕೆಗೊಂಡಿರುವ ಇಂಜಿನಿಯರುಗಳಲ್ಲಿ ಮನವಿ ಮಾಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ನಿವೃತ್ತ ನ್ಯಾಯಮೂರ್ತಿ ಎಂ.ಎನ್. ವೆಂಕಟಾಚಲಯ್ಯ ಅವರು, ಗಾಂಧೀಜಿಯವರು ಗ್ರಾಮೀಣಾಭಿವೃದ್ಧಿಯಾದರೇ ದೇಶದ ಅಭಿವೃದ್ಧಿಯಾಗಲು ಸಾಧ್ಯವೆಂದು ಹೇಳಿದ್ದಾರೆ. ಆದ್ದರಿಂದ ಗ್ರಾಮೀಣ ಜನರ ನಂಬಿಕೆಗೆ ದ್ರೋಹವಾಗದಂತೆ ಆತ್ಮ ಗೌರವದಿಂದ ಗ್ರಾಮೀಣಾಭಿವೃದ್ಧಿಗೆ ಶ್ರಮಿಸುವ ಜೊತೆಗೆ ಗ್ರಾಮೀಣ ಭಾಗದಲ್ಲಿರುವ ಲಾಟರಿ, ಮದ್ಯಪಾನೀಯ ಮಾರಾಟ ಮುಂತಾದ ದುಶ್ಚಟಗಳನ್ನು ಗ್ರಾಮೀಣ ಭಾಗದಿಂದ ಹೊಡೆದೊಡಿಸಬೇಕೆಂದು ಅಭಿಪ್ರಾಯಪಟ್ಟರು.

ಗಾಂಧಿಭವನದ ಅಧ್ಯಕ್ಷರು ಮತ್ತು ಗಾಂಧಿವಾದಿಗಳಾದ ಹೊ. ಶ್ರೀನಿವಾಸಯ್ಯ ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ನೂತನವಾಗಿ ಆಯ್ಕೆಗೊಂಡಿರುವ ೭೦೦ ಮಂದಿ ಕಿರಿಯ ಇಂಜಿನಿಯರುಗಳ ಪೈಕಿ ಸಾಂಕೇತಿಕವಾಗಿ ಇಂದು ೨೨೦ ಮಂದಿಗೆ ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿ, ಕೆಲಸ ಸಿಕ್ಕಿದೆ ಎಂದು ಸಂಬಳಕ್ಕಾಗಿ ಮಾತ್ರ ಕೆಲಸ ಮಾಡದೇ ಹೊಸ ಹೊಸ ಸಂಶೋದನೆಗಳಲ್ಲಿ ತಮ್ಮನ್ನು ತೊಡಗಿಕೊಂಡು ಸಮಾಜಕ್ಕೆ ಒಳ್ಳೆಯ ಕೊಡುಗೆಯನ್ನು ನೀಡಿ. ಒಳ್ಳೆಯ ಕೆಲಸದಿಂದ ಸಿಗುವ ಸಂತೋಷ ಬೇರೆ ಯಾವುದರಿಂದಲೂ ಸಿಗುವುದಿಲ್ಲ. ತಮ್ಮ ಕೈಕೆಳಗಿನ ನೌಕರರನ್ನು ಪ್ರೀತಿ ವಿಶ್ವಾಸದಿಂದ ಕಾಣಬೇಕು. ಪ್ರೀತಿಯಿಂದ ಏನನ್ನಾದರೂ ಗೆಲ್ಲಬಹುದು ಎಂದು ಅವರು ನೂತನ ಇಂಜಿನಿಯರುಗಳಿಗೆ ಕಿವಿಮಾತು ಹೇಳಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಸಂಜೀವಕುಮಾರ್, ಡಾ: ನಾಗಾಂಬಿಕದೇವಿ, ಮುಖ್ಯ ಇಂಜಿನಿಯರ್ ಬಿ.ಗುರುಪ್ರಸಾದ್, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಲ್ಲಾಜಮ್ಮ ಸೇರಿದಂತೆ ಮತ್ತಿತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಮಮತ/ಪೂರ್ಣಿಮ

## ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ತಿಂಗಳಿಗೊಮ್ಮೆ ಜನತಾ ದರ್ಶನ : ಸಿದ್ದರಾಮಯ್ಯ

ಬೆಂಗಳೂರು, ಸೆಪ್ಟೆಂಬರ್ 15 ( ಕರ್ನಾಟಕ ವಾರ್ತೆ ) :

ಪ್ರತಿ ತಿಂಗಳಿಗೊಮ್ಮೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಜನತಾ ದರ್ಶನ ಕಾರ್ಯಕ್ರಮವನ್ನು ನಡೆಸಬೇಕೆಂದು ರಾಜ್ಯ ಸರ್ಕಾರ ಸುತ್ತೋಲೆ ಹೊರಡಿಸಿದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಪ್ರಕಟಿಸಿದರು.

ತಮ್ಮ ಗೃಹ ಕಚೇರಿ ಕೃಷ್ಣಾದಲ್ಲಿ ಮಂಗಳವಾರ ನಡೆದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದ ಅವರು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಈ ನಿಟ್ಟಿನಲ್ಲಿ ಈಗಾಗಲೇ ಸುತ್ತೋಲೆ ಹೊರಡಿಸಿ, ಎಲ್ಲಾ ಜಿಲ್ಲಾಧಿಕಾರಿಗಳಿಗೂ ಕಳುಹಿಸಿದ್ದಾರೆ ಎಂದರು.

ಮುಖ್ಯಮಂತ್ರಿಯವರೇ ಖುದ್ದು ಅಹವಾಲುಗಳನ್ನು ಸ್ವೀಕರಿಸಿ, ಸಾರ್ವಜನಿಕರ ಕುಂದು-ಕೊರತೆಗಳನ್ನು ಆಲಿಸುವ ಜನತಾ ದರ್ಶನ ಕಾರ್ಯಕ್ರಮದಲ್ಲಿ ಈ ಹಿಂದೆ ಸ್ವೀಕೃತವಾಗಿದ್ದ 4500 ಅರ್ಜಿಗಳ ಪೈಕಿ, 3000 ಅರ್ಜಿಗಳಲ್ಲಿ ನಿವೇದಿಸಲಾಗಿದ್ದ ಸಮಸ್ಯೆಗಳನ್ನು ಬಗೆಹರಿಸಲಾಗಿದೆ. ನ್ಯಾಯಾಲಯ ಮೆಟ್ಟಿಲೇರಿರುವ ಪ್ರಕರಣಗಳೂ ಒಳಗೊಂಡಂತೆ 850 ಪ್ರಕರಣಗಳು ಇನ್ನೂ ಇತ್ಯರ್ಥವಾಗದೆ ಬಾಕಿ ಉಳಿದಿವೆ. ಅಲ್ಲದೆ, 650 ಅರ್ಜಿಗಳು ತಿರಸ್ಕೃತಗೊಂಡಿವೆ. ಒಟ್ಟಾರೆ ವಿಲೇವಾರಿ ಪ್ರಮಾಣ ಶೇಕಡಾ 80 ರಷ್ಟಿದೆ ಎಂದು ಅಂಕಿ-ಅಂಶಗಳನ್ನು ನೀಡಿದರು.

ವೈದ್ಯಕೀಯ ಪರಿಹಾರಕ್ಕೆ ಕೋರಿ ಬರುವ ಅರ್ಜಿಗಳ ಸಂಖ್ಯೆ ಅಧಿಕವಾಗಿರುತ್ತದೆ. ವಿಕಲ ಚೇತನರ ಮಾಸಾಶನ, ಸಾಲ ಸೌಲಭ್ಯ, ನಿವೇಶನ ಹಾಗೂ ಮನೆ ಹಂಚಿಕೆಗೂ ಹೇರಳವಾಗಿ ಅರ್ಜಿಗಳು ಸ್ವೀಕೃತವಾಗುತ್ತವೆ. ಭೂ ವ್ಯಾಜ್ಯಗಳು, ಮನೆ ಮಾಲೀಕನ ಕಿರುಕುಳ, ಜೀವ ರಕ್ಷಣೆ, ಪೊಲೀಸರ ನಿರ್ಲಕ್ಷ್ಯ ಕುರಿತ ದೂರುಗಳೂ ಜನತಾ ದರ್ಶನದಲ್ಲಿ ದಾಖಲಾಗುತ್ತವೆ ಎಂದು ಮುಖ್ಯಮಂತ್ರಿ ವಿವರಿಸಿದರು.

**ಸಂಪುಟ ವಿಸ್ತರಣೆ-ಪುನಾರಚನೆ ?**

ಸಂಪುಟ ವಿಸ್ತರಣೆಯೂ ಇದೆ ಹಾಗೂ ಸಂಪುಟ ಪುನಾರಚನೆಯೂ ಇದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಪ್ರಕಟಿಸಿ, ಎಲ್ಲರಲ್ಲೂ ಕುತೂಹಲ ಕೆರಳಿಸಿದರು. ರಾಜ್ಯ ಸಚಿವ ಸಂಪುಟವನ್ನು ವಿಸ್ತರಿಸುವಿರಾ ? ಪುನಾರಚಿಸುವಿರಾ ? ಎಂಬ ಎರಡೂ ಪ್ರಶ್ನೆಗಳಿಗೆ ಸಕಾರಾತ್ಮಕವಾಗಿ ಉತ್ತರಿಸಿ ಎಲ್ಲರ ಹುಬ್ಬೇರುವಂತೆ ಮಾಡಿದರು.

ಒಂಭತ್ತನೇ ಸ್ಥಾನದಲ್ಲಿ ಕರ್ನಾಟಕ

ಕೈಗಾರಿಕಾ ಪ್ರಗತಿಯಲ್ಲಿ ರಾಷ್ಟ್ರದಲ್ಲಿಯೇ ಕರ್ನಾಟಕವು ಒಂಭತ್ತನೇ ಸ್ಥಾನದಲ್ಲಿದೆ ಎಂಬ ವಿಶ್ವ ಬ್ಯಾಂಕ್‌ನ ವರದಿ ತಮಗೆ ಸಂತಸ ತಂದಿದೆ. ಬಂಡವಾಳ ಹೂಡಿಕೆಗೆ ಅತ್ಯುತ್ತಮ ಗಮ್ಯಸ್ಥಾನ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಕರ್ನಾಟಕದಲ್ಲಿ ತಮ್ಮ ಸರ್ಕಾರ ಜಾರಿಗೆ ತಂದ ನೂತನ ಕೈಗಾರಿಕಾ ನೀತಿಯು ಕೈಗಾರಿಕಾ-ಸ್ನೇಹಿಯಾಗಿದೆ. ಅಲ್ಲದೆ, ಬಂಡವಾಳ ಹೂಡಲು ಉದ್ಯಮಿಗಳಿಗೆ ವಿಪುಲ ಅವಕಾಶಗಳನ್ನು ಕಲ್ಪಿಸಿದೆ.

ಜಿಮ್ ಮುಂದೂಡಿಕೆ ?

ರಾಜ್ಯವು ತೀವ್ರ ಬರಗಾಲಕ್ಕೆ ತುತ್ತಾಗಿರುವ ಹಿನ್ನೆಲೆಯಲ್ಲಿ ನವೆಂಬರ್ 23 ರಿಂದ 25 ರ ವರೆಗೆ ನಿಗದಿಯಾಗಿದ್ದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶ(ಜಿಮ್)ವನ್ನು ಮುಂದೂಡಬೇಕೆಂಬ ಸಲಹೆಯ ಸಾಧಕ-ಬಾಧಕಗಳನ್ನು ಪರಿಶೀಲಿಸಲಾಗುತ್ತಿದೆ. ರಾಜ್ಯದಲ್ಲಿ ಬರ ಪರಿಸ್ಥಿತಿ ಹೀಗೆಯೇ ಮುಂದುವರೆದರೆ, ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ಎರಡು ತಿಂಗಳು ಮುಂದೂಡುವ ಬಗ್ಗೆ ಚಿಂತನೆ ನಡೆಯುತ್ತಿದೆ ಎಂದು ಪ್ರಶ್ನೆಯೊಂದಕ್ಕೆ ಶ್ರೀ ಸಿದ್ದರಾಮಯ್ಯ ಅವರು ಉತ್ತರಿಸಿದರು.

ಕಳಸಾ-ಬಂಡೂರಿ : ಮಧ್ಯಂತರ ಅರ್ಜಿ ಸಲ್ಲಿಸಲು ಪರಿಶೀಲನೆ

ಮಹದಾಯಿ ನದಿ ಪಾತ್ರದಲ್ಲಿ ಕಳಸಾ-ಬಂಡೂರಿ ನಾಲಾ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಎದುರಾಗಿರುವ ಸಮಸ್ಯೆಯನ್ನು ಬಗೆಹರಿಸಲು ಜಲ ಸಂಪನ್ಮೂಲ ಸಚಿವ ಶ್ರೀ ಎಂ. ಬಿ. ಪಾಟೀಲ್ ಅವರು ನವದೆಹಲಿಯಲ್ಲಿ ರಾಜ್ಯ ವಕೀಲ ತಂಡದ ಮುಖ್ಯಸ್ಥ ಶ್ರೀ ಫಾಲಿ ಎಸ್ ನಾರಿಮನ್ ಅವರನ್ನು ಭೇಟಿಯಾಗಿ ಭಾರತ ಸರ್ವೋಚ್ಚ ನ್ಯಾಯಾಲಯದಲ್ಲಿ ಮಧ್ಯಂತರ ಅರ್ಜಿ ಸಲ್ಲಿಸುವ ಬಗ್ಗೆ ಪರಿಶೀಲನೆ ನಡೆಸಿದ್ದಾರೆ. ಈ ನಿಟ್ಟಿನಲ್ಲಿ ರಾಜ್ಯದ ಜನತೆಗೆ, ವಿಶೇಷವಾಗಿ ಆ ಭಾಗದ ರೈತರಿಗೆ, ನ್ಯಾಯ ದೊರಕಿಸಿಕೊಡುವ ಪ್ರಾಮಾಣಿಕ ಪ್ರಯತ್ನವನ್ನು ಸರ್ಕಾರ ಮಾಡಲಿದೆ ಎಂದರು.

ಕಾವೇರಿ : ಸಂಕಷ್ಟವನ್ನು ಹಂಚಿಕೊಳ್ಳಬೇಕು

ತಮಿಳು ನಾಡಿಗೆ ನೀರು ಬಿಡಲಾಗದು ಎಂದು ರಾಜ್ಯದ ಮುಖ್ಯ ಕಾರ್ಯದರ್ಶಿಯವರು ಬರೆದಿರುವ ಪತ್ರಕ್ಕೆ ಪ್ರತಿಕ್ರಿಯಿಸಿದ ಶ್ರೀ ಸಿದ್ದರಾಮಯ್ಯ ಅವರು *ಕೊಡಲು ನೀರು ಎಲ್ಲಿದೆ ?* ಎಂದು ಪ್ರಶ್ನಿಸಿದರಲ್ಲದೆ, ಕಾವೇರಿ ನದಿ ನೀರು ಹಂಚಿಕೆ ಕುರಿತಂತೆ ನ್ಯಾಯಾಧಿಕರಣದ ತೀರ್ಪಿಗೆ ಅನುಗುಣವಾಗಿ ತಮಿಳು ನಾಡು ಸರ್ಕಾರ ಸಂಕಷ್ಟ ಸೂತ್ರವನ್ನು ಒಪ್ಪಿಕೊಂಡು, ಸಂಕಷ್ಟವನ್ನು ಹಂಚಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಕೃಷ್ಣ ರಾಜ ಸಾಗರ ತುಂಬಿದ ನಂತರ ಕಾವೇರಿಗೆ ಬಾಗಿನ

ಕೃಷ್ಣ ರಾಜ ಸಾಗರ ಜಲಾಶಯದ ಪೂರ್ಣ ಪ್ರಮಾಣದ ಮಟ್ಟ 124 ಅಡಿಗೆ ಪ್ರತಿಯಾಗಿ ಜಲಾಶಯದಲ್ಲಿ ಪ್ರಸ್ತುತ ನೀರಿನ ಮಟ್ಟ 106 ಅಡಿ ಇದೆ. ಅಂದರೆ 49 ಟಿ ಎಂ ಸಿ ಗೆ ಪ್ರತಿಯಾಗಿ ಜಲಾಶಯದಲ್ಲಿ 26 ಟಿ ಎಂ ಸಿ ನೀರು ಸಂಗ್ರಹವಿದೆ. ಕೃಷ್ಣ ರಾಜ ಸಾಗರ ಜಲಾಶಯ ತುಂಬಿದ ನಂತರ ದಕ್ಷಿಣದ ಗಂಗೆ ಕಾವೇರಿ ಮಾತೆಗೆ ಸಾಂಪ್ರದಾಯಿಕವಾಗಿ ಬಾಗಿನ ಅರ್ಪಿಸಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

ವಿದ್ಯುತ್ ಖರೀದಿ

ಉತ್ತರ ಭಾರತದ ರಾಜ್ಯಗಳಿಂದ ವಿದ್ಯುತ್ ಖರೀದಿಸಿ ರಾಜ್ಯದಲ್ಲಿ ಎದುರಾಗಿರುವ ವಿದ್ಯುತ್ ಸಮಸ್ಯೆಯನ್ನು ಪರಿಹರಿಸಬಹುದು ಎಂಬ ಪತ್ರಕರ್ತರೋರ್ವರ ಸಲಹೆಯನ್ನು ತಳ್ಳಿ ಹಾಕಿದ ಶ್ರೀ ಸಿದ್ದರಾಮಯ್ಯ ಅವರು ಉತ್ತರ ಭಾರತದ ರಾಜ್ಯಗಳಿಂದ ವಿದ್ಯುತ್ ಖರೀದಿಸಲು ಮಾರ್ಗಗಳಿಲ್ಲ ( ಕಾರಿಡಾರ್ ಇಲ್ಲ ). ವಾಸ್ತವಿಕ ನೆಲಗಟ್ಟಿನಲ್ಲಿ ಮಾತನಾಡಿ ಎಂದರು. ಅಲ್ಲದೆ, ರಾಜ್ಯದ ವಿದ್ಯುತ್ ಸಮಸ್ಯೆಯನ್ನು ಬಗೆಹರಿಸಲು ತಮ್ಮ ಸರ್ಕಾರ ಎಲ್ಲಾ ಪ್ರಾಮಾಣಿಕ ಪ್ರಯತ್ನಗಳನ್ನೂ ಮಾಡುತ್ತಿದೆ ಎಂದು ಪುನರುಚ್ಛರಿಸಿದರು.

ರಾಘವೇಶ್ವರ ಪ್ರಕರಣ

ಸಂಶೋಧಕ ಹಾಗೂ ಸಾಹಿತಿ ಡಾ ಎಂ. ಎಂ. ಕಲಬುರ್ಗಿ ಅವರ ಹತ್ಯಾ ಪ್ರಕರಣದ ತನಿಖೆ ಮಂದಗತಿಯಲ್ಲಿ ಸಾಗುತ್ತಿದೆ. ಅಂತೆಯೇ, ರಾಮಚಂದ್ರಾಪುರ ಮಠಾಧೀಶ ಶ್ರೀ ರಾಘವೇಶ್ವರ ಭಾರತಿ ಅವರ

**ಮೇಲೆ ಎರಡು ಅತ್ಯಾಚಾರ ಆರೋಪಗಳಿದ್ದರೂ ಸರ್ಕಾರ ಮೃದು ಧೋರಣೆ ತಾಳಿದೆ ಎಂಬ ಭಾವನೆ ಜನರಲ್ಲಿ ಮೂಡಿದೆ. ಈ ಬಗ್ಗೆ ತಮ್ಮ ಪ್ರತಿಕ್ರಿಯೆ ಏನು ? ಎಂದು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು ಈ ಎರಡೂ ಪ್ರಕರಣಗಳ ಕುರಿತಂತೆ ಸಿ ಐ ಡಿ ತನಿಖೆ ನಡೆಯುತ್ತಿದೆ. ಕಾನೂನಿನ ಪ್ರಕಾರ ಸಾಕ್ಷ್ಯ ಸಂಗ್ರಹ ಮತ್ತು ಹೇಳಿಕೆ ಪಡೆಯುವ ಪ್ರಕ್ರಿಯೆ ನಡೆಯುತ್ತಿದೆ. ನಂತರ ಆರೋಪಿಗಳ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗುವುದು. ಇಂತಹ ಪ್ರಕರಣಗಳಲ್ಲಿ ಸರ್ಕಾರ ಮಧ್ಯ ಪ್ರವೇಶಿಸುವುದಿಲ್ಲ. ಯಾರ ಒತ್ತಡಕ್ಕೂ ಹಾಗೂ ಯಾವ ಒತ್ತಡಕ್ಕೂ ಮಣಿಯುವುದಿಲ್ಲ. ನೆಲದ ನ್ಯಾಯವೇ ಅಂತಿಮ ಎಂದು ಸ್ಪಷ್ಟಪಡಿಸಿದರು.**

**************

**ಡಿ ಪಿ ಎಂ**